# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **647 (586)** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ. ಬಿ. ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | **22.07.2024** |
| **ಉತ್ತರಿಸುವ ಸಚಿವರು** | **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು** |

*****

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| **ಅ** | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಇದುವರೆಗೂ ಎಷ್ಟು ಡೆಂಘ್ಯೂ ಪ್ರಕರಣ ಕಂಡು ಬಂದಿವೆ? | ದಿನಾಂಕ: 01.01.2024 ರಿಂದ 17.07.2024ರವರೆಗೆ ಕಲಬುರಗಿ ಜಿಲ್ಲೆಯಲ್ಲಿ 269 ಪ್ರಕರಣಗಳು ಮತ್ತು ಯಾದಗಿರಿ ಜಿಲ್ಲೆಯಲ್ಲಿ 21 ಪ್ರಕರಣಗಳು ವರದಿಯಾಗಿರುತ್ತವೆ. |
| **ಆ** | ಈ ಸಾಂಕ್ರಾಮಿಕ ರೋಗದ ಬಗ್ಗೆ ಜನ ಜಾಗೃತಿ ಮೂಡಿಸಲು ಸರ್ಕಾರ ಎಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ;<br><br>(ಅಂಕಿ ಸಂಖ್ಯೆ ಸಹಿತ ವಿವರ ನೀಡುವುದು) | ಕಲಬುರಗಿ ಜಿಲ್ಲೆಯಲ್ಲಿ ಡೆಂಗ್ಯೂ ರೋಗದ ನಿಯಂತ್ರಣಕ್ಕಾಗಿ ಈ ಕೆಳಕಂಡಂತೆ ಜಾಗೃತಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ.<br>1.ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಡೆಂಗ್ಯೂ ನಿಯಂತ್ರಣ ಕುರಿತು ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ ಹಾಗೂ ಅಂತರ್ ಇಲಾಖಾ ಸಮನ್ವಯ ಸಭೆಯನ್ನು 5 ಬಾರಿ ನಡೆಸಲಾಗಿದೆ.<br>2. ದಕ್ಷಿಣ ಮತಕ್ಷೇತ್ರದ ಶಾಸಕರಾದ ಶ್ರೀ ಅಲ್ಲಮಪ್ರಭು ಪಾಟೀಲ ರವರ ಅಧ್ಯಕ್ಷತೆಯಲ್ಲಿ ಸಾರ್ವಜನಿಕರಿಗೆ ಡೆಂಗ್ಯೂ ಅರಿವಿನ ಬಗ್ಗೆ ಸಭೆ ನಡೆಸಲಾಗಿದೆ.<br>3.ಮಹಾನಗರ ಪಾಲಿಕೆ ಕಮೀಷನರ್ ಹಾಗೂ ಸಿಬ್ಬಂದಿಗಳೊಂದಿಗೆ ಡೆಂಗ್ಯೂ ನಿಯಂತ್ರಣ ಕುರಿತು ನಗರ ಪ್ರದೇಶದಲ್ಲಿ ಕೈಗೊಳ್ಳಬಹುದಾದ ತುರ್ತು ಕ್ರಮಗಳ ಬಗ್ಗೆ 2 ಸಭೆಯನ್ನು ನಡೆಸಲಾಗಿದೆ.<br>4.ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಎಲ್ಲಾ ಕಾರ್ಯಕ್ರಮ ಅಧಿಕಾರಿಗಳ, ತಾಲ್ಲೂಕು ಆರೋಗ್ಯಾಧಿಕಾರಿಗಳ, ವೈದ್ಯಾಧಿಕಾರಿಗಳ ಮತ್ತು ಸಿಬ್ಬಂದಿಗಳೊಂದಿಗೆ 7 ಸಭೆಗಳನ್ನು ನಡೆಸಲಾಗಿದ್ದು ಎಲ್ಲಾ ಅಗತ್ಯ ಮುಂಜಾಗ್ರತ ಹಾಗೂ ನಿಯಂತ್ರಣ ಕ್ರಮಗಳ ಬಗ್ಗೆ ಮತ್ತು ಕೈಗೊಳ್ಳಬೇಕಾದ ಜರೂರು ಕಾರ್ಯಗಳ ಬಗ್ಗೆ ಮಾಹಿತಿ ನೀಡಲಾಗಿದೆ.<br>5.ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು **FM Radio** ಕಾರ್ಯಕ್ರಮದಲ್ಲಿ ಡೆಂಗ್ಯೂ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಿರುತ್ತಾರೆ.<br>6.ಶಾಲಾ ಶಿಕ್ಷಕರಿಗೆ ಮತ್ತು ಮಕ್ಕಳಿಗೆ ಡೆಂಗ್ಯೂ ನಿಯಂತ್ರಣ ಕ್ರಮಗಳ ಬಗ್ಗೆ ಆರೋಗ್ಯ ಶಿಕ್ಷಣ ನೀಡಲಾಗಿದ್ದು ಡೆಂಗಿ ಕುರಿತು **110** ಗ್ರಾಮಗಳಲ್ಲಿ ಶಾಲಾ ಮಕ್ಕಳಿಂದ ಜಾಥಾಗಳನ್ನು |

| | | |
|---|---|---|
| | | ನಡೆಸಲಾಗಿದೆ.<br>7.ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಡೆಂಗ್ಯೂ ಕುರಿತು 65 ಬಾರಿ ಸಭೆಗಳನ್ನು ಮಾಡಲಾಗಿದೆ.<br>8.ಗ್ರಾಮ ಪಂಚಾಯತಿ ಸದಸ್ಯರಿಗೆ ಡೆಂಗ್ಯೂ ಕುರಿತು ಹಾಗೂ ಅದರ ನಿಯಂತ್ರಣದ ಬಗ್ಗೆ ಅರಿವು ಮತ್ತು ಜಾಗೃತಿ ಮೂಡಿಸಲು **54** ಕಡೆಗಳಲ್ಲಿ ಸಭೆಗಳನ್ನು ಮಾಡಲಾಗಿದೆ.<br>9.ಸಮುದಾಯದವರಿಗೆ ಡೆಂಗ್ಯೂ ಜ್ವರದ ಕುರಿತು **167** ಗುಂಪು ಸಭೆಗಳನ್ನು ಮಾಡಲಾಗಿದೆ.<br>10.ಜಿಲ್ಲಾ ಕೀಟ ಶಾಸ್ತ್ರಜ್ಞರು ಡೆಂಗ್ಯೂ ಕುರಿತು ಕವನವನ್ನು ರಚನೆ ಮಾಡಿ, ರಾಗ ಸಂಯೋಜಿಸಿ ಸಭೆಗಳಲ್ಲಿ ಮತ್ತು ಗ್ರಾಮ ಮಟ್ಟದಲ್ಲಿ ಹಾಡುವುದರ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸುತ್ತಿದ್ದಾರೆ.<br>11.ಮಹಾನಗರ ಪಾಲಿಕೆಯಿಂದ ಘನ ತ್ಯಾಜ್ಯ ಸಂಗ್ರಹಿಸಲು ಬರುವ ವಾಹನಗಳಿಗೆ ಮೈಕ್‌ನ್ನು ಅಳವಡಿಸಿ ಹಾಡುಗಳ ಮೂಲಕ ಸಾರ್ವಜನಿಕರಿಗೆ ಡೆಂಗ್ಯೂ ಮತ್ತು ನಿಯಂತ್ರಣ ಕ್ರಮಗಳ ಕುರಿತು ಮಾಹಿತಿಯನ್ನು ನೀಡಲಾಗುತ್ತಿದೆ.<br>12.**3000What's app** ಗುಂಪುಗಳಿಗೆ ಡೆಂಗ್ಯೂ ಕುರಿತು ಸನ್ಮಾನ್ಯ ಮುಖ್ಯಮಂತ್ರಿಗಳು ಹಾಗೂ ಆರೋಗ್ಯ ಸಚಿವರ ವಿಡಿಯೋಗಳನ್ನು ಹಾಕಿ ಪ್ರಚುರಪಡಿಸಲಾಗಿದೆ.<br>13.ಜಿಲ್ಲೆಗಳಲ್ಲಿ **KSRTC** ಡಿಪೋಗಳಿಗೆ ಭೇಟಿ ನೀಡಿ ಅಲ್ಲಿನ ಮುಖ್ಯಸ್ಥರ ಮತ್ತು ಕಾರ್ಯ ಸಿಬ್ಬಂದಿಗಳೊಂದಿಗೆ ಚರ್ಚಿಸಿ ಡಿಪೋದಲ್ಲಿರುವ ಬ್ಯಾರಲ್, ಟೈಯರ್ ಮತ್ತು ವಾಹನದ ಬಿಡಿ ಭಾಗಗಳ ಘನ ತ್ಯಾಜ್ಯಗಳಲ್ಲಿ ಮಳೆಯ ನೀರು ಸಂಗ್ರಹವಾಗದಂತೆ ಕ್ರಮಕೈಗೊಂಡು ಸಾಧ್ಯವಾದಷ್ಟು ಅವುಗಳನ್ನು ಮುಚ್ಚುವಂತೆ ತಿಳಿಸಿ ಲಾರ್ವ ಉತ್ಪತ್ತಿ ತಾಣಗಳ ಬಗ್ಗೆ ಅರಿವು ಮೂಡಿಸಲಾಗಿದೆ.<br>14.ಜಿಲ್ಲಾ ಟಾಸ್ಕ್ ಫೋರ್ಸ್ ಸಭೆ ಮಾಡಿ ಇತರೆ ಇಲಾಖೆಗಳಿಗೆ ಡೆಂಗ್ಯೂ ಅರಿವು ನೀಡಿ ಅವರಿಂದ ಸಹಕಾರ ಕೋರಲಾಗಿದೆ.<br>15.ಜನನಿಬಿಡ ಪ್ರದೇಶಗಳಲ್ಲಿ ಡೆಂಗ್ಯೂ ರೋಗದ ಮಾಹಿತಿಯುಳ್ಳ **20** ಬ್ಯಾನರ್ ಕಟ್ಟಲಾಗಿದೆ. ಭಿತ್ತಿ ಪತ್ರ ಹಾಗೂ **30000** ಕರ-ಪತ್ರಗಳನ್ನು ಸಾರ್ವಜನಿಕರಿಗೆ ಹಂಚಲಾಗಿದೆ.<br>16.**PDO**ಗಳಿಗೆ ಡೆಂಗ್ಯೂ ಬಗ್ಗೆ ಜಾಗೃತಿ ಮೂಡಿಸುವ **132** ಕಾರ್ಯಗಾರಗಳನ್ನು ಮಾಡಲಾಗಿದೆ.<br>17.ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಸಿಲ್ದಾರರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ **10** ಬಾರಿ ಸಭೆಗಳನ್ನು ನಡೆಸಿದ್ದು ಡೆಂಗ್ಯೂ ಬಗ್ಗೆ ಅರಿವು ಮೂಡಿಸಿ ಲಾರ್ವ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲು ಸಹಕರಿಸುವಂತೆ ಕೋರಲಾಗಿದೆ.<br><br>ಯಾದಗಿರಿ ಜಿಲ್ಲೆಯಲ್ಲಿ ಸಾಂಕ್ರಾಮಿಕ ರೋಗದ ಬಗ್ಗೆ ಈ ಕೆಳಕಂಡಂತೆ ಜಾಗೃತಿ ಮೂಡಿಸಲಾಗಿದೆ.<br>1.ಶಾಲಾ ಮಟ್ಟದಲ್ಲಿ ಡೆಂಗ್ಯೂ ಅರಿವು ಕುರಿತು **150** ಜಾಥಾ |

<table>
<tr><td></td><td></td><td>ಮಾಡಲಾಗಿದ್ದು, ಗ್ರಾಮಸ್ಥರಿಗೆ ಡೆಂಗಿ ಹಾಗು ಅದರ ನಿಯಂತ್ರಣ ಕ್ರಮಗಳ ಬಗ್ಗೆ ಅರಿವು ಮೂಡಿಸಲಾಗಿದೆ.<br>2.ಗ್ರಾಮ ಪಂಚಾಯತ್ ಸದಸ್ಯರಿಗೆ 45 ಗುಂಪು ಸಭೆಗಳನ್ನು ಮಾಡಲಾಗಿದೆ.<br>3.ಸಾರ್ವಜನಕರಿಗೆ ಡೆಂಗ್ಯೂ ಅರಿವು ಕುರಿತು 120 ಗುಂಪು ಸಭೆಗಳನ್ನು ಗ್ರಾಮ ಮಟ್ಟದಲ್ಲಿ ಮಾಡಲಾಗಿದೆ.<br>4.ಕೆ.ಎಸ್.ಆರ್.ಟಿ.ಸಿ ಹಾಗೂ ಇತರೆ ಇಲಾಖೆಗಳಿಗೆ ಭೇಟಿ ನೀಡಿ ಅಲ್ಲಿನ ಸಿಬ್ಬಂದಿಗಳಿಗೆ ಡೆಂಗ್ಯೂ ಹಾಗೂ ಅದರ ನಿಯಂತ್ರಣ ಕ್ರಮಗಳ ಬಗ್ಗೆ ಅರಿವು ಮೂಡಿಸಲಾಗಿದೆ.<br>5.ಸ್ಥಳೀಯ ಚಾನಲ್‌ಗಳಲ್ಲಿ ಡೆಂಗ್ಯೂ ಅರಿವು ಮೂಡಿಸುವ ಬಗ್ಗೆ ಪ್ರಕಟಣೆ ನೀಡಲಾಗಿದೆ.<br>6.ನಗರ ಸಭೆ ಕಸ ವಿಲೇವಾರಿ ವಾಹನಗಳಲ್ಲಿ ಮೈಕ್ ಮೂಲಕ ಸಾರ್ವಜನಿಕರಿಗೆ ಡೆಂಗ್ಯೂ ಜ್ವರ ಹಾಗೂ ನಿಯಂತ್ರಣ ಕ್ರಮಗಳ ಬಗ್ಗೆ ಅರಿವು ಮೂಡಿಸಲಾಗಿದೆ.<br>7.ಜನನಿಬಿಡ ಸಾರ್ವಜನಿಕ ಸ್ಥಳಗಳಲ್ಲಿ ಡೆಂಗ್ಯೂ ಹಾಗೂ ನಿಯಂತ್ರಣ ಕ್ರಮಗಳ ಮಾಹಿತಿಯುಳ್ಳ ಬ್ಯಾನರ್‌ಗಳನ್ನು ಕಟ್ಟಲಾಗಿದ್ದು 500 ಭಿತ್ತಿ ಪತ್ರಗಳನ್ನು ಅಂಟಿಸಲಾಗಿದೆ.<br>ರಾಜ್ಯ ಮಟ್ಟದಿಂದ ಕೈಗೊಂಡಿರುವ ಕ್ರಮಗಳನ್ನು ಅನುಬಂಧ-01 ರಲ್ಲಿ ನೀಡಲಾಗಿದೆ.</td></tr>
<tr><td>ಇ</td><td>ಸದರಿ ಜಿಲ್ಲೆಗಳಲ್ಲಿ ವೈದ್ಯರ ಸಮಸ್ಯೆ ತೀವ್ರತರವಾಗಿದ್ದು, ಮುಂಜಾಗ್ರತೆಯ ಕ್ರಮವಹಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ:<br>(ವಿವರ ನೀಡುವುದು.</td><td>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಮಂಜೂರು, ಕಾರ್ಯನಿರತ ಹಾಗೂ ಖಾಲಿ ಹುದ್ದೆಗಳ ವಿವರಗಳು ಈ ಕೆಳಕಂಡಂತಿವೆ:
<table>
<tr><th>ಕ್ರ. ಸಂ</th><th>ವೃಂದ</th><th>ಮಂಜೂರಾತಿ</th><th>ಕಾರ್ಯನಿರತ</th><th>ಗುತ್ತಿಗೆ</th><th>ಖಾಲಿ</th></tr>
<tr><td>1.</td><td>ಕಲಬುರಗಿ ಜಿಲ್ಲೆ</td><td>ತಜ್ಞವೈದ್ಯರು–108</td><td>65</td><td>18</td><td>25</td></tr>
<tr><td></td><td></td><td>ಸಾ.ಕ.ವೈ - 92</td><td>74</td><td>16</td><td>02</td></tr>
<tr><td></td><td></td><td>ಸಿಎಂಒ–24</td><td>05</td><td>-</td><td>21</td></tr>
<tr><td></td><td></td><td>ಎಸ್ಎಂಒ- 16</td><td>09</td><td>-</td><td>07</td></tr>
<tr><td>2.</td><td>ಯಾದಗಿರಿ ಜಿಲ್ಲೆ</td><td>ತಜ್ಞವೈದ್ಯರು– 49</td><td>26</td><td>02</td><td>21</td></tr>
<tr><td></td><td></td><td>ಸಾ.ಕ.ವೈ - 55</td><td>34</td><td>11</td><td>10</td></tr>
<tr><td></td><td></td><td>ಸಿಎಂಒ –24</td><td>02</td><td>-</td><td>02</td></tr>
<tr><td></td><td></td><td>ಎಸ್ಎಂಒ - 07</td><td>03</td><td>-</td><td>04</td></tr>
</table>
ಖಾಲಿಯಿರುವ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮಕೈಗೊಳ್ಳಲಾಗುತ್ತಿದೆ:-</td></tr>
</table>

| | | |
|---|---|---|
| | | 1. ಪತ್ರ ಸಂಖ್ಯೆ: ಆಕುಕ 453 ಹೆಚ್‌ಎಸ್‌ಹೆಚ್ 2022, ದಿನಾಂಕ:13.12.2022ರಲ್ಲಿ ರಾಜ್ಯದ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳನ್ನು ಹೊರತು ಪಡಿಸಿ ಇತರೆ ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರದೇಶಗಳ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಚಾಲ್ತಿಯಲ್ಲಿರುವ ಸರ್ಕಾರದ ಆದೇಶಗಳಡಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯಾಮಾನುಸಾರ ಭರ್ತಿಮಾಡಲು ಅನುಮತಿ ನೀಡಲಾಗಿದೆ.<br>2. ಆದೇಶ ಸಂಖ್ಯೆ:ಆಕುಕ **619** ಹೆಚ್‌ಎಸ್‌ಹೆಚ್ 2022, ದಿ:17.01.2024ರಲ್ಲಿ ಇಲಾಖೆಯಲ್ಲಿ ಖಾಲಿಯಿರುವ **337** ತಜ್ಞ ವೈದ್ಯರನ್ನು ಮತ್ತು **250** ಸಾ.ಕ.ವೈದ್ಯಾಧಿಕಾರಿಗಳನ್ನು ಕೆಲವು ಷರತ್ತುಗಳಿಗೊಳಪಟ್ಟು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಿರುತ್ತಾರೆ.<br>3. ಇಲಾಖೆಯ ಮುಖಾಂತರ ಸೇವಾನಿರತ ಸ್ನಾತಕೋತ್ತರ ವ್ಯಾಸಂಗ ಪೂರೈಸಿರುವ ತಜ್ಞ ವೈದ್ಯರನ್ನು ತಜ್ಞರ ಹುದ್ದೆಗೆ ನೇಮಿಸಲಾಗುತ್ತಿದೆ.<br>4. ಸ್ನಾತಕೋತ್ತರ ವ್ಯಾಸಂಗವನ್ನು ಪೂರೈಸಿ **1** ವರ್ಷದ ಕಡ್ಡಾಯ ಸೇವೆಗಾಗಿ ಬರುವ ವೈದ್ಯ ಅಭ್ಯರ್ಥಿ/ತಜ್ಞವೈದ್ಯ ಅಭ್ಯರ್ಥಿಗಳನ್ನು ನೇಮಕ ಮಾಡುವ ಮೂಲಕ ವೈದ್ಯರ/ತಜ್ಞರುಗಳ ಕೊರತೆಯನ್ನು ನಿವಾರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| **ಈ** | ಡೆಂಗ್ಯೂ ಚಿಕಿತ್ಸೆಗೆ ಸರ್ಕಾರ ನಿಗಧಿಪಡಿಸಿದ ದರ ಎಷ್ಟು; ಈ ದರ ಆಸ್ಪತ್ರೆಗಳಲ್ಲಿ ಕಟ್ಟು ನಿಟ್ಟಾಗಿ ಪಾಲನೆಯಾಗುತ್ತಿದೆಯೇ; ಹೆಚ್ಚು ದರ ಪಡೆದ ಆಸ್ಪತ್ರೆಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ?<br><br>(ವಿವರ ನೀಡುವುದು) | ಡೆಂಗ್ಯೂ ಜ್ವರ ಪ್ರಕರಣಗಳ ಪರೀಕ್ಷೆ, ಚಿಕಿತ್ಸೆ ಹಾಗೂ ನಿರ್ವಹಣೆಯ ಸೌಲಭ್ಯಗಳನ್ನು (**ICU** ಸೇರಿದಂತೆ) ಇಲಾಖೆಯ ವ್ಯಾಪ್ತಿಯಲ್ಲಿನ ಎಲ್ಲಾ ಆರೋಗ್ಯ ಸಂಸ್ಥೆಗಳಲ್ಲಿ ಸಂಪೂರ್ಣ ಉಚಿತವಾಗಿ ಒದಗಿಸಲಾಗುತ್ತಿದೆ. (**BPL & APL** ವರ್ಗದವರಿಗೆ).<br><br>ಡೆಂಗ್ಯೂ ಜ್ವರ ಖಚಿತ ಪಡಿಸಿಕೊಳ್ಳಲು ಮಾಡುವ ಎಲಿಸಾ ಆಧಾರಿತ **NS1; IgM** ಪರೀಕ್ಷೆಗೆ ತಲಾ ರೂ300/–ಮೀರದಂತೆ ಹಾಗೂ **Screening test**ಗಳಿಗೆ (**NS1, IgM; IgG**) ರೂ250/–ಗಳ ಶುಲ್ಕವನ್ನು ಖಾಸಗಿ ಆಸ್ಪತ್ರೆ ಹಾಗೂ ಖಾಸಗಿ ಪ್ರಯೋಗ ಶಾಲೆಗಳಿಗೆ ನಿಗದಿಪಡಿಸಿ ಸುತ್ತೋಲೆ ಹೊರಡಿಸಲಾಗಿದೆ.<br><br>ಹೆಚ್ಚುದರ ನಿಗದಿಪಡಿಸಿದ ಆಸ್ಪತ್ರೆಗಳ ವಿರುದ್ಧ ದೂರುಗಳು ಸ್ವೀಕೃತವಾದಲ್ಲಿ ಅಂತಹ ಆಸ್ಪತ್ರೆಗಳಿಗೆ ಕೆ.ಪಿ.ಎಂ.ಇ ಕಾಯಿದೆ ಯನ್ವಯ ಸೂಕ್ತ ಕ್ರಮ ಕೈಗೊಳ್ಳಲಾಗುವುದು. |

**ಆಕುಕ 92 ಎಸ್‌ಎಂಎಂ 2024**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**

## ಅನುಬಂಧ-01

1. ಆಯುಕ್ತರು, ಆಕುಕ ಇಲಾಖೆರವರು, ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರಿಗೆ ಪತ್ರವನ್ನು ಬರೆದು ಪೌರಾಡಳಿತ ವ್ಯಾಪ್ತಿಯಲ್ಲಿ ಬರುವ ಪಟ್ಟಣಗಳು/ ನಗರ ವ್ಯಾಪ್ತಿಯಲ್ಲಿ ನಿರ್ಮಾಣ ಹಂತದ ಕಟ್ಟಡಗಳ ಕಾಮಗಾರಿ ಪ್ರದೇಶಗಳಲ್ಲಿ, ಹೋಟೆಲ್ , ಅಂಗಡಿ-ಮುಂಗಟ್ಟುಗಳು, ವಾಣಿಜ್ಯ ಸಂಕೀರ್ಣಗಳ ಸುತ್ತ-ಮುತ್ತಲಿನ ಘನ ತ್ಯಾಜ್ಯಗಳಲ್ಲಿ ಮಳೆನೀರು ಸಂಗ್ರಹವಾಗಲಿದ್ದು ಅಲ್ಲಿ ಈಡೀಸ್ ಬೆಳವಣಿಗೆ ಹೆಚ್ಚಾಗುವುದರಿಂದ ಘನತ್ಯಾಜ್ಯಗಳನ್ನು ವಿಲೇವಾರಿ ಮಾಡುವ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿರುತ್ತಾರೆ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ದಿನಾಂಕ:**07-06-2024** ರಂದು ಅಂತರ್ ಇಲಾಖಾ ಸಮನ್ವಯ ಸಭೆಯನ್ನು ನಡೆಸಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಗ್ರಾಮೀಣಾಭಿವೃದ್ಧಿ & ಪಂಚಾಯತ್ ರಾಜ್ ಇಲಾಖೆ, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಕೃಷಿ, ಮೀನುಗಾರಿಕೆ, ಸಾರಿಗೆ ಇಲಾಖೆ ಇತ್ಯಾದಿಗಳ ಇಲಾಖೆಯ ಮುಖ್ಯಸ್ಥರೊಂದಿಗೆ ಸಭೆ ನಡೆಸಿ, ಡೆಂಗಿ ಜ್ವರ ನಿಯಂತ್ರಣದಲ್ಲಿ ಎಲ್ಲಾ ಇಲಾಖೆಗಳು ಆರೋಗ್ಯ ಇಲಾಖೆಯೊಂದಿಗೆ ಸಹಕರಿಸಲು ಸೂಚಿಸಲಾಗಿದೆ.
3. ದಿನಾಂಕ: **25-06-2024** ರಂದು ಸನ್ಮಾನ್ಯ ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ ಡೆಂಗಿ ನಿಯಂತ್ರಣಕ್ಕೆ ಸಮನ್ವಯ ಸಭೆಯನ್ನು ನಡೆಸಿ ರಾಜ್ಯಾದ್ಯಂತ ಪ್ರತಿ ಶುಕ್ರವಾರ "ಲಾರ್ವಾ ನಿರ್ಮೂಲನ ದಿನ"ವನ್ನು ಆಚರಿಸಲು ಮಾನ್ಯ ಮುಖ್ಯ ಮಂತ್ರಿಯವರು ಸಲಹೆ ನೀಡಿರುತ್ತಾರೆ. ಅದರಂತೆ ರಾಜ್ಯಾದ್ಯಂತ ಪ್ರತಿ ಶುಕ್ರವಾರ "ಲಾರ್ವಾ ನಿರ್ಮೂಲನ ದಿನ"ವನ್ನು ಹಮ್ಮಿಕೊಳ್ಳಲಾಗಿದೆ ನೀಡಲಾಗಿದೆ.
4. ದಿನಾಂಕ:**02-07-2024** ರಂದು ಮಾನ್ಯ ಆರೋಗ್ಯ ಸಚಿವರ ಅಧ್ಯಕ್ಷತೆಯಲ್ಲಿ ಅಂತರ್ ಇಲಾಖಾ ಸಮನ್ವಯ ಸಭೆಯನ್ನು ಏರ್ಪಡಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ, ಗ್ರಾಮೀಣಾಭಿವೃದ್ಧಿ & ಪಂಚಾಯತ್ ರಾಜ್, ನಗರ ಅಭಿವೃದ್ಧಿ ಇಲಾಖೆ, ಪೌರಾಡಳಿತ ಇಲಾಖೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗು ಇತ್ಯಾದಿ ಇಲಾಖೆಗಳೊಂದಿಗೆ ಸಭೆ ನಡೆಸಿ, ಡೆಂಗಿ ಜ್ವರ ನಿಯಂತ್ರಿಸಲು ತಮ್ಮ ತಮ್ಮ ಇಲಾಖಾ ವ್ಯಾಪ್ತಿಯಲ್ಲಿ ಶೀಘ್ರವೇ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದರು.
5. ದಿನಾಂಕ: **04-07-2024** ರಂದು ಮಾನ್ಯ ಆರೋಗ್ಯ ಸಚಿವರ ಅಧ್ಯಕ್ಷತೆಯಲ್ಲಿ ರಾಜ್ಯಾದ ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಎಲ್ಲಾ ಕಾರ್ಯನಿರ್ವಾಹಣಾಧಿಕಾರಿಗಳು ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ವರ್ಚುಯಲ್ ಸಭೆ ನಡೆಸಿ, ಜಿಲ್ಲಾಧಿಕಾರಿಗಳಿಗೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ಪ್ರತಿ ಶುಕ್ರವಾರ ತಮ್ಮ ಇಲಾಖೆಯ ಕಛೇರಿಗಳಲ್ಲಿ ಲಾರ್ವಾ ನಿರ್ಮೂಲನ ದಿನದ ಕಾರ್ಯಕ್ರಮವನ್ನು ಹಮ್ಮಿಕೊಂಡು ಲಾರ್ವಾ ನಾಶಪಡಿಸಿ ಡೆಂಗಿ ಹರಡದಂತೆ ಕ್ರಮಕೈಗೊಳ್ಳಲು ಸೂಚಿಸಿದರು.
6. ದಿನಾಂಕ: **08-07-2024** ಮತ್ತು **09-07-2024** ಸನ್ಮಾನ್ಯ ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ ರಾಜ್ಯದ ಮುಖ್ಯ ಕಾರ್ಯದರ್ಶಿಗಳು, ಅಪರ ಮುಖ್ಯ ಕಾರ್ಯದರ್ಶಿಗಳು, ಎಲ್ಲಾ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯದರ್ಶಿಗಳು ಮತ್ತು ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳ ಸಭೆಯನ್ನು ನಡೆಸಿ ಡೆಂಗಿ ನಿಯಂತ್ರಣಕ್ಕೆ ಎಲ್ಲಾ ಇಲಾಖೆಗಳ ಸಮನ್ವಯತೆಯೊಂದಿಗೆ ಸಮರೋಪಾದಿಯಲ್ಲಿ ಡೆಂಗಿಜ್ವರ ಹರಡದಂತೆ ಎಲ್ಲಾ ನಿಯಂತ್ರಣ ಕ್ರಮಗಳನ್ನು ಹಾಗೂ ಎಲ್ಲರಿಗೂ ಸೂಕ್ತ ಚಿಕಿತ್ಸೆ ದೊರೆಯುವಂತೆ ಮತ್ತು ಮರಣ ಪ್ರಕರಣಗಳು ಸಂಭವಿಸದಂತೆ ಸೂಕ್ತ ಕ್ರಮಕೈಗೊಂಡು ಕ್ಷಿಪ್ರ ಕಾರ್ಯಾಚರಣೆ ಪಡೆಯನ್ನು ತಮ್ಮ ಜಿಲ್ಲೆಯಲ್ಲಿ ರಚಿಸಿ, ಡೆಂಗಿ ಕಂಡು ಬಂದ ಗ್ರಾಮಗಳಿಗೆ ಶೀಘ್ರವೇ ಭೇಟಿನೀಡಿ ನಿಯಂತ್ರಣ ಕ್ರಮಕೈಗೊಳ್ಳಲು ಸೂಚಿಸಿದರು.



Generated from eOffice by PADMA V, HFW-US-HEALTH(PV), UNDER SECRETARY, HEALTH AND FAMILY WELFARE SEC on 25/07/2024 01:06 PM

ಅನುಬಂಧ - 2

ಕರ್ನಾಟಕ ಸರ್ಕಾರದ ನಡವಳಿಗಳು

| | |
|---|---|
| ವಿಷಯ:- | ರಾಜ್ಯದಲ್ಲಿ ಡೆಂಗಿ ಜ್ವರ ಪತ್ತೆ ಹಚ್ಚುವ ಪರೀಕ್ಷೆಗಳಾದ ಎಲಿಸಾ ಹಾಗೂ ರಾಪಿಡ್ ಟೆಸ್ಟ್ ಗಳ ದರವನ್ನು ಮರುನಿಗದಿಪಡಿಸುವ ಬಗ್ಗೆ |
| ಓದಲಾಗಿದೆ: | 1.ಸುತ್ತೋಲೆ ಸಂಖ್ಯೆ DD/SSU/Dengue/2015-16, ದಿನಾಂಕ: 12.9.2016. 2.ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧಿನಿಯಮ 2020 ರ ಸೆಕ್ಷನ್ 4 (1) & 4(2) k. |

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1) ರನ್ವಯ ರಾಜ್ಯದಲ್ಲಿ ಡೆಂಗಿಜ್ವರ ಪತ್ತೆ ಹಚ್ಚುವ ಪರೀಕ್ಷೆಗಳಾದ ಎಲಿಸಾ ಹಾಗೂ ರಾಪಿಡ್ ಟೆಸ್ಟ್‌ಗಳ ದರವನ್ನು ನಿಗದಿಗೊಳಿಸಲಾಗಿತ್ತು. ಖಾಸಗಿ ಆಸ್ಪತ್ರೆಗಳು ಹಾಗೂ ಖಾಸಗಿ ಪ್ರಯೋಗಶಾಲೆಗಳ/ ಡಯಾಗ್ನೋಸ್ಟಿಕ್ ಲ್ಯಾಬೋರೇಟರಿಗಳು ಡೆಂಗಿಜ್ವರ ಪತ್ತೆಹಚ್ಚುವ ಪರೀಕ್ಷೆಗಳಿಗೆ ವಿವಿಧ ದರಗಳನ್ನು ವಿಧಿಸಲಾಗುತ್ತಿದೆ.

ಪ್ರಸ್ತುತ ರಾಜ್ಯದಲ್ಲಿ ಡೆಂಗಿಜ್ವರ ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಮೇಲೆ ಓದಲಾದ ಕ್ರಮಾಂಕ (2)ರನ್ವಯ, ಡೆಂಗಿ ಜ್ವರ ಪತ್ತೆ ಹಚ್ಚುವ ELISA ಹಾಗೂ Rapid card test ದರಗಳನ್ನು (Screening test) ಪರಿಷ್ಕರಿಸಲು ಉದ್ದೇಶಿಸಲಾಗಿರುತ್ತದೆ.

ಆದರಂತೆ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 250 ಸಿಜಿಎಂ 2024**
**ಬೆಂಗಳೂರು, ದಿನಾಂಕ:03-7-2024**

ಪ್ರಸ್ತಾವನೆಯಲ್ಲಿ ತಿಳಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಜ್ಯದ ಖಾಸಗಿ ಆಸ್ಪತ್ರೆಗಳಿಗೆ ಹಾಗೂ ಖಾಸಗಿ ಟೆಸ್ಟಿಂಗ್ ಲ್ಯಾಬ್‌ಗಳಿಗೆ ಡೆಂಗಿಜ್ವರ ಪತ್ತೆ ಹಚ್ಚುವ ELISA ಹಾಗೂ Rapid card test ದರಗಳನ್ನು ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶಿಸಿದೆ.

| ಕ್ರಮಸಂಖ್ಯೆ | ಪರೀಕ್ಷಾವಿಧಾನ | ಪರಿಷ್ಕೃತದರರೂ.ಗಳಲ್ಲಿ |
|---|---|---|
| 1 | Dengue ELISA NS1 | ರೂ.300-/ |
| 2 | Dengue ELISA IgM | ರೂ.300-/ |
| 3 | Screening test<br>Rapid card test for NS1, IgM & IgG | ಒಟ್ಟುರೂ .250/- |

ಸದರಿ ಆದೇಶವನ್ನು ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧಿನಿಯಮ 2020, ಸೆಕ್ಷನ್ 4 (1) & 4(2) k ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಹೊರಡಿಸಲಾಗಿರುತ್ತದೆ.

ರಾಜ್ಯದ ಖಾಸಗಿ ಆಸ್ಪತ್ರೆಗಳು, ಖಾಸಗಿ ಪ್ರಯೋಗಶಾಲೆಗಳು/ ಡಯಾಗ್ನೋಸ್ಟಿಕ್ ಲ್ಯಾಬೊರೇಟರಿಗಳು ಈ ಮೇಲೆ ತಿಳಿಸಿದ ಡೆಂಗಿಜ್ವರ ಪತ್ತೆ ಪರೀಕ್ಷೆಯ ಪರಿಷ್ಕೃತ ದರಗಳನ್ನು ನಿಗದಿಪಡಿಸಿ ಹೊರಡಿಸಿರುವ ಆದೇಶವನ್ನು ಪಾಲಿಸುವಂತೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
03/7/2024
(ಪದ್ಮ ವಿ.)
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಆರೋಗ್ಯ 1 & 2)

**ಇವರಿಗೆ:-**

1. ಮುಖ್ಯ ಆಯುಕ್ತರು, ಬಿಬಿಎಂಪಿ
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.



Generated from eOffice by PADMA V, HFW-US-HEALTH(PV), UNDER SECRETARY, HEALTH AND FAMILY WELFARE SEC on 25/07/2024 01:06 PM